# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2016-17ನೇ ಸಾಲಿನಲ್ಲಿ ಎಂ.ಎಸ್.ಡಿ.ಪಿ ಯೋಜನೆಯಡಿ ಸ್ವಂತ ಕಟ್ಟಡದಲ್ಲಿ ನಿರ್ಮಿಸಲಾಗಿರುವ ಸ್ಥಳಗಳಲ್ಲಿ ಹೊಸದಾಗಿ ಮತ್ತು 08 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 02 ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಹುದ್ದೆಗಳ ಸೃಜನೆಯೊಂದಿಗೆ ಪ್ರಾರಂಭಿಸಲು ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:-**
1. 2016-17ನೇ ಸಾಲಿನ ಆಯವ್ಯಯ ಭಾಷಣ.
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ಎಂ.ಎಸ್.ಡಿ.ಪಿ/ವಿನಿ/ವಶಾ/ಸಿಆರ್-52/2016-17 ದಿನಾಂಕ: 26.05.2016.

>>>()<<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ (1)ರಲ್ಲಿ 2016-17ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-207 ರಲ್ಲಿ ಎಂ.ಎಸ್.ಡಿ.ಪಿ ಯೋಜನೆಯಡಿ ಸ್ವಂತ ಕಟ್ಟಡದಲ್ಲಿ ನಿರ್ಮಿಸಲಾಗಿರುವ ಸ್ಥಳಗಳಲ್ಲಿ ಹೊಸದಾಗಿ ಮತ್ತು 08 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 02 ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಪ್ರಾರಂಭಿಸುವುದಾಗಿ ಘೋಷಿಸಿರುತ್ತಾರೆ.

ಈ ಯೋಜನೆಯು ಮುಂದುವರೆದ ಕಾರ್ಯಕ್ರಮವಾಗಿದ್ದು, ಮೇಲೆ ಘೋಷಿಸಿರುವ ಕಾರ್ಯಕ್ರಮಗಳನ್ನು ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ, ಎಂ.ಎಸ್.ಡಿ.ಪಿ ಯೋಜನೆಯಡಿ ಸ್ವಂತ ಕಟ್ಟಡದಲ್ಲಿ ನಿರ್ಮಿಸಲಾಗಿರುವ ಸ್ಥಳಗಳಲ್ಲಿ ಹೊಸದಾಗಿ ಮತ್ತು 08 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 02 ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಅಗತ್ಯ ಹುದ್ದೆಗಳನ್ನು ಸೃಜಿಸಿ ಪ್ರಾರಂಭಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಏಕಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 210 MDS 2016 ಬೆಂಗಳೂರು ದಿನಾಂಕ: 01-09-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ, ಈ ಕೆಳಕಂಡ ಸ್ಥಳಗಳಲ್ಲಿ ಎಂ.ಎಸ್.ಡಿ.ಪಿ ಯೋಜನೆಯಡಿ ಸ್ವಂತ ಕಟ್ಟಡದಲ್ಲಿ ನಿರ್ಮಿಸಲಾಗಿರುವ ಸ್ಥಳಗಳಲ್ಲಿ ಹೊಸದಾಗಿ ಮತ್ತು 08 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು 02 ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಅನುಬಂಧದಲ್ಲಿ